**ಕರ್ನಾಟಕ ಸರ್ಕಾರ**

ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01.

ಸಂಖ್ಯೆ:ಸಿ3(7)ಪ್ರಾ.ಶಿ. ವರ್ಗ-07/2017-18 ದಿನಾಂಕ: 25-08-2018

**: ಜ್ಞಾಪನ :**

ವಿಷಯ:- 2017-18 ನೇ ಸಾಲಿನ ಸರ್ಕಾರಿ ಪ್ರಾಥಮಿಕ ಹಾಗು ಪ್ರೌಢಶಾಲಾ ಶಿಕ್ಷಕರ ವೃಂದದ ವರ್ಗಾವಣೆಗಳನ್ನು ಗಣಕೀಕೃತ ಕೌನ್ಸಿಲಿಂಗ್ ಮೂಲಕ ಮಾಡುವ ಬಗ್ಗೆ ಪರಿಷ್ಕೃತ ವೇಳಾಪಟ್ಟಿ- ಹೆಚ್ಚುವರಿ ಶಿಕ್ಷಕರ ಮರು ನಿಯುಕ್ತಿ ಕ್ರಮಗಳ ಕುರಿತಂತೆ ವೇಳಾಪಟ್ಟಿ - ತಾತ್ಕಾಲಿಕವಾಗಿ ಮುಂದೂಡಿರುವ ಬಗ್ಗೆ ಸೂಚನೆಗಳು

ಉಲ್ಲೇಖ:- ಈ ಕಛೇರಿ ಅಧಿಸೂಚನೆ ಸಂಖ್ಯೆ ಸಿ3(1). ವೃಂದ ಬಲ.ಜಿಲ್ಲಾ ಹಂ /2017-18 ದಿ: 02-02-2018.

----*****--

ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲಾ ಹೆಚ್ಚುವರಿ ಶಿಕ್ಷಕರ ಕೌನ್ಸಿಲಿಂಗ್ ಪ್ರಕ್ರಿಯೆಗಳ ಕುರಿತಂತೆ, ಏಕ ಕಡತದಲ್ಲಿ ಸರ್ಕಾರದ ಆದೇಶದನುಸಾರ; ನೀತಿ ಅಂಶಗಳಲ್ಲಿ ಕೆಲವು ಮಾರ್ಪಾಡುಗಳನ್ನು ಮಾಡಲು ಆದೇಶವಾಗಿದೆ. ಈ ಬದಲಾವಣೆಗಳನ್ನು ತಂತ್ರಾಂಶದಲ್ಲಿ ಅಳವಡಿಸಲು ಕಾಲಾವಕಾಶದ ಅಗತ್ಯವಿರುವುದರಿಂದ ದಿನಾಂಕ: 26-08-2018 ಹಾಗೂ ದಿನಾಂಕ: 27-08-2018ರಂದು ನಡೆಯಬೇಕಾಗಿದ್ದ ಪ್ರಾಥಮಿಕ ಶಾಲಾ [redacted] ಶಿಕ್ಷಕರ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಮುಂದಿನ ಆದೇಶದವರೆಗೆ ಮುಂದೂಡಲಾಗಿದೆ. ಮುಂದಿನ ದಿನಾಂಕಗಳನ್ನು ನಂತರದಲ್ಲಿ ಪ್ರಕಟಿಸಲಾಗುತ್ತದೆ. ಪ್ರೌಢಶಾಲಾ ಹೆಚ್ಚುವರಿ ಶಿಕ್ಷಕರ ಕೌನ್ಸಿಲಿಂಗ್ ಕುರಿತ ಪರಿಸ್ಕೃತ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ. ಈ ಕುರಿತಂತೆ ವ್ಯಾಪ್ತಿಯ ಎಲ್ಲಾ ಶಿಕ್ಷಕರ ಗಮನಕ್ಕೆ ತುರ್ತಾಗಿ ಪ್ರಚುರಪಡಿಸತಕ್ಕದ್ದು.

(ಡಾ. ಪಿ.ಸಿ.ಜಾಫರ್),
ಆಯುಕ್ತರು.

ಗೆ,

1. ಸಾರ್ವಜನಿಕ ಶಿಕ್ಷಣ ಇಲಾಖೆಯ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) ರವರಿಗೆ

**ಪ್ರತಿಯನ್ನು:-**

2. ಸರ್ಕಾರದ ಕಾರ್ಯದರ್ಶಿಗಳು (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ಇವರಿಗೆ ವಂದನಾ ಪೂರ್ವಕವಾಗಿ ಸಲ್ಲಿಸಿದೆ.
3. ಆಪ್ತ ಕಾರ್ಯದರ್ಶಿಯವರು, ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
4. ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ರಾಜ್ಯ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು.
5. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳವರಿಗೆ ಮಾಹಿತಿಗಾಗಿ ಕಳುಹಿಸಿದೆ.
6. ಸಹ ನಿರ್ದೇಶಕರು (ಆಡಳಿತ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
7. ಆಪ್ತ ಕಾರ್ಯದರ್ಶಿಯವರು, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ
8. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ/ಧಾರವಾಡ
9. ಕಛೇರಿ ಪ್ರತಿ

Scanned by CamScanner